# ಕೇಂದ್ರೀಯ ಹತ್ತಿ ಸಂಶೋಧನಾ ಸಂಸ್ಥೆ, ನಾಗಪುರ, ಮಹಾರಾಷ್ಟ್ರ

*[ ಭಾರತೀಯ ಕೃಷಿ ಅನುಸಂಧಾನ ಪರಿಷತ್ತು (ಭಾ. ಕೃ. ಅ. ಪ), ಕೃಷಿ ಮಂತ್ರಾಲಯ, ಭಾರತ ಸರ್ಕಾರ ]*

## ಹತ್ತಿ ಬೆಳೆಯ ಸಾಪ್ತಾಹಿಕ ಸಲಹೆ, 16 ರಿಂದ 22 ಜುಲೈ, 2026 ರ ಅವಧಿಗೆ

*"ಈ ಸಲಹೆಯು ರಾಜ್ಯ ಕೃಷಿ ವಿಶ್ವವಿದ್ಯಾನಿಲಯಗಳಿಂದ ಸ್ವೀಕರಿಸಿದ ಮಾಹಿತಿಯನ್ನು ಆಧರಿಸಿದೆ"*

### ಅ. ಮಣ್ಣಿನ ಆರೋಗ್ಯ, ಪೋಷಣೆ, ಹಾಗೂ ಕೀಟ ಮತ್ತು ರೋಗ ನಿರ್ವಹಣೆಯ ಕುರಿತಾದ ಸಾಮಾನ್ಯ ಸಲಹೆ

ಹೆಚ್ಚಿನ ಹತ್ತಿ ಇಳುವರಿಯು ಸಮತೋಲಿತ ಮಣ್ಣಿನ ಪೋಷಣೆ, ನೀರಿನ ನಿರ್ವಹಣೆ ಮತ್ತು ಪೂರ್ವಭಾವಿ ನಿರೀಕ್ಷಣೆ ಆಧಾರಿತ ಕೀಟ ಮತ್ತು ರೋಗ ನಿರ್ವಹಣೆಯನ್ನು ಅವಲಂಬಿಸಿದೆ. ಸಂಪೂರ್ಣ ಮತ್ತು ಸಮಗ್ರ ಬೆಳೆ ನಿರ್ವಹಣಾ ಯೋಜನೆಯನ್ನು ಅನುಷ್ಠಾನಗೊಳಿಸುವುದರಿಂದ ಸರಿಯಾದ ಬೆಳವಣಿಗೆ ಮತ್ತು ಚೈತನ್ಯವನ್ನು ಖಚಿತಪಡಿಸುವುದರೊಂದಿಗೆ ಬೇಸಾಯ ವೆಚ್ಚವನ್ನು ಕಡಿಮೆ ಮಾಡುತ್ತದೆ. ಇದಲ್ಲದೇ, ಬೆಳೆಯನ್ನು ವಿನಾಶಕಾರಿ ಕೀಟ ಮತ್ತು ರೋಗ ಹಾನಿಯಿಂದ ರಕ್ಷಿಸುತ್ತದೆ.

### ಮಣ್ಣಿನ ಆರೋಗ್ಯ ಮತ್ತು ಪೋಷಕಾಂಶ ನಿರ್ವಹಣೆ (INM)

- **ಸೂಕ್ಷ್ಮ ಪೋಷಕಾಂಶಗಳನ್ನು ಅತ್ಯುತ್ತಮವಾಗಿಸಿ:** ಬೆಳೆ ತಿರುಗುವಿಕೆ, ಸಾವಯವ ಗೊಬ್ಬರ ಮತ್ತು ಹೊದಿಕೆ ಬೆಳೆಗಳಿಗೆ ಆದ್ಯತೆ ನೀಡುವ ಮೂಲಕ ಮತ್ತು ಬಿತ್ತನೆ ಪೂರ್ವ ಮಣ್ಣಿನ ಪರೀಕ್ಷೆಯ ಆಧಾರದ ಮೇಲೆ ತರ್ಕಬದ್ಧ ರಾಸಾಯನಿಕ ಗೊಬ್ಬರವನ್ನು ಬಳಸುವ ಮೂಲಕ ಮಣ್ಣಿನ ಆರೋಗ್ಯವನ್ನು ಸುಧಾರಿಸಿ.

- **ಸೂಕ್ಷ್ಮ ಪೋಷಕಾಂಶಗಳನ್ನು ಅನ್ವಯಿಸಿ:** ಅಗತ್ಯವಿರುವಂತೆ ಉದ್ದೇಶಿತ ಸಿಂಪಡಣೆಗಳ ಮೂಲಕ ದ್ವಿತೀಯ ಮತ್ತು ಸೂಕ್ಷ್ಮ ಪೋಷಕಾಂಶಗಳ ಕೊರತೆಗಳನ್ನು (ಸತು, ಬೋರಾನ್, ಮ್ಯಾಂಗನೀಸ್ ಮತ್ತು ಮೆಗ್ನೀಸಿಯಮ್‌ನಂತಹ) ಪೂರ್ವಭಾವಿಯಾಗಿ ಪರಿಹರಿಸಿ.

### ರೋಗ ನಿರ್ವಹಣೆ (IDM)

- **ರೋಗ ತಡೆಗಟ್ಟುವ ಪದ್ಧತಿಗಳನ್ನು ನಿಯೋಜಿಸಿ:** ಮಣ್ಣಿನಿಂದ ಹರಡುವ ಮತ್ತು ಎಲೆಗಳಿಂದ ಹರಡುವ ರೋಗಕಾರಕಗಳ ನಿರ್ವಹಣೆಯನ್ನು ಸಮಗ್ರ ಕೃಷಿ ಪದ್ಧತಿಗಳ ಮೂಲಕ ಸಾಧಿಸಬೇಕು, ಇದರಲ್ಲಿ ಸರಿಯಾದ ಕ್ಷೇತ್ರ ನೈರ್ಮಲ್ಯ, ಜೈವಿಕ ಕೀಟನಾಶಕಗಳು ಮತ್ತು ಜೈವಿಕ ಗೊಬ್ಬರಗಳನ್ನು ಬೀಜ ಮತ್ತು ಮಣ್ಣಿನ ಉಪಚಾರಗಳಾಗಿ ಅನ್ವಯಿಸುವುದು, ಸಸ್ಯ ಆರೋಗ್ಯವನ್ನು ಹೆಚ್ಚಿಸಲು ಮತ್ತು ರೋಗದ ಸಂಭವವನ್ನು ನಿಗ್ರಹಿಸಲು ಸಹಾಯ ಮಾಡುತ್ತದೆ.
- **ಏಕಾಏಕಿ ರೋಗ ಪ್ರಸಾರ ನಿಯಂತ್ರಣ:** ಹೆಚ್ಚಿನ ಆರ್ದ್ರತೆಯ ಅವಧಿಯಲ್ಲಿ ನಿಯಮಿತ ಕ್ಷೇತ್ರ ಮೇಲ್ವಿಚಾರಣೆಯನ್ನು ಕೈಗೊಳ್ಳಬೇಕು ಮತ್ತು ಚಾಲ್ತಿಯಲ್ಲಿರುವ ಪರಿಸರ ಪರಿಸ್ಥಿತಿಗಳು ತ್ವರಿತ ರೋಗ ಬೆಳವಣಿಗೆ ಮತ್ತು ಹರಡುವಿಕೆಗೆ ಅನುಕೂಲಕರವಾದಾಗ ಮಾತ್ರ ಶಿಫಾರಸು ಮಾಡಲಾದ ಶಿಲೀಂಧ್ರನಾಶಕಗಳನ್ನು ವಿವೇಚನೆಯಿಂದ ಅನ್ವಯಿಸಬೇಕು.

### ಸಮಗ್ರ ಕೀಟ ನಿರ್ವಹಣೆ (IPM)

- ಕ್ಷೇತ್ರ ಶೋಧನೆ ನಡೆಸುವುದು: ಕಾಯಿಕೊರಕಗಳ ಜೊತೆಗೆ ರಸ ಹೀರುವ ಕೀಟಗಳನ್ನು (ಥ್ರಿಪ್ಸ್ ನುಸಿ , ಹೇನು, ಜಿಗಿ ಹುಳುಗಳು, ಮತ್ತು ಜೇಡ ಹುಳಗಳು) ನಿರೀಕ್ಷಣೆ ಮಾಡಲು ವಾರಕ್ಕೊಮ್ಮೆ ಕ್ಷೇತ್ರ ಶೋಧನೆ ಮಾಡಿ.
- ಜಿಗುಟು ಬಲೆ ಮತ್ತು ಜೈವಿಕ ಕೀಟನಾಶಕಗಳನ್ನು ಬಳಸಿ: ವಯಸ್ಕ ಪತಂಗಗಳ ಹಾರಾಟವನ್ನು ಪತ್ತೆಹಚ್ಚಲು ಹಾಗೂ ಮೊಟ್ಟೆ ಇಡುವ ಚಕ್ರಗಳನ್ನು ಊಹಿಸಲು ಋತುವಿನ ಆರಂಭದಲ್ಲಿ ಲಿಂಗಾಕರ್ಷಕ ಬಲೆಗಳನ್ನು ನೆಡಬೇಕು. ಪ್ರಾಥಮಿಕ ಪ್ರತಿಕ್ರಿಯೆಯಾಗಿ ಸಾವಯವ, ನೈಸರ್ಗಿಕ ಅಥವಾ ಸಸ್ಯ ಆಧಾರಿತ ಕೀಟನಾಶಕಗಳನ್ನು ಸಿಂಪಡಿಸಬೇಕು.
- ನೈಸರ್ಗಿಕ ಮಿತ್ರಕೀಟಗಳನ್ನು ಸಂರಕ್ಷಿಸಿ: ವ್ಯಾಪಕ ವ್ಯಾಪ್ತಿಯ ರಾಸಾಯನಿಕಗಳಿಗಿಂತ ನಿರ್ದಿಷ್ಟ ಕೀಟನಾಶಕಗಳನ್ನು ಆರಿಸುವ ಮೂಲಕ ಮಿತ್ರ ಕೀಟಗಳ ಸಂರಕ್ಷಣೆ ಮಾಡಬೇಕು.
- ರಾಸಾಯನಿಕ ಬಳಕೆ ನಿರ್ಬಂಧಿಸಿ: ಕೀಟಗಳ ಸಂಖ್ಯೆಯು ಆರ್ಥಿಕ ಗರಿಷ್ಟ ಮಿತಿಯನ್ನು ತಲುಪಿದಾಗ ಮಾತ್ರ, ಲೇಬಲ್-ಶಿಫಾರಸು ಮಾಡಿದ ರಾಸಾಯನಿಕ ಕೀಟನಾಶಕಗಳನ್ನು ಕೊನೆಯ ಉಪಾಯವಾಗಿ ಬಳಸಬೇಕು.

# ಬ. ನಿರ್ದಿಷ್ಟ ಸ್ಥಳಕ್ಕೆ ಸಂಬಂಧಿಸಿದ ಸಲಹೆ

| ಕರ್ನಾಟಕ | ಕಳೆದ ವಾರದಲ್ಲಿ ಬಿದ್ದ ಮಳೆಯ ವಿವರ (ಮಿ.ಮೀ) | | | | | | IMDಯ ಪ್ರಕಾರ ಮಳೆಯ ಮುನ್ಸೂಚನೆ (ಮಿ.ಮೀ) | | | | | |
|---|---|---|---|---|---|---|---|---|---|---|---|---|
| ತಿಂಗಳು | ಜುಲೈ | | | | | | ಜುಲೈ | | | | | |
| ದಿನಾಂಕ | 07 | 08 | 09 | 10 | 11 | 12 | 13 | 15 | 16 | 17 | 18 | 19 |
| ಧಾರವಾಡ | 31 | 10.8 | 11.2 | 0 | 0 | 0 | 0 | 0 | 1.1 | 2.3 | 5 | 2 |
| ಹಾವೇರಿ | | | | | | | | 0 | 0.4 | 0.7 | 5 | 3.4 |
| ಮೈಸೂರು | | | | | | | | 0 | 0 | 0.4 | 3.6 | 1.8 |

| ಮಳೆಯ ಮಾಹಿತಿಯ ಮಾದರಿ | | | | | | ಮಳೆಯ ಮಾಹಿತಿಯ ಮೂಲ: |
|---|---|---|---|---|---|---|
| ಮಳೆಯ ಪ್ರಮಾಣ (ಮಿ.ಮೀ) | 0.1-2.4 | 2.5-15.5 | 15.6-64.4 | 64.5-115.5 | 115.6-204.4 | http://nwp.imd.gov.in/bias/dist_fcst.htm |

**ಬೆಳೆಯ ಸ್ಥಿತಿ:**

ಧಾರವಾಡದಲ್ಲಿ ಬೆಳೆಯು 15 ರಿಂದ 20 ದಿನಗಳ ಆರಂಭಿಕ ಬೆಳವಣಿಗೆಯ ಹಂತದಲ್ಲಿದೆ. ಸುತ್ತಮುತ್ತಲಿನ ಪ್ರದೇಶಗಳಲ್ಲಿ ಅಲ್ಲಲ್ಲಿ ಮಳೆಯಾಗಿದ್ದು, ಕಳೆ ನಿರ್ವಹಣೆ ಪ್ರಗತಿಯಲ್ಲಿದೆ. ಮೂತಿ ಹುಳುವಿನ ನಿರ್ವಹಣೆಗಾಗಿ ಪ್ರತಿ 20 ಸಾಲ್ಗಳ ನಂತರ ಬೆಂಡೆಯನ್ನು ಬೆಳೆಯಬೇಕು. ಯಾವುದೇ ರೋಗ, ಕೀಟ ಅಥವಾ ಕಳೆಯ ಬಾಧೆ ಕಂಡು ಬಂದಿಲ್ಲ.

ರಾಯಚೂರಿನಲ್ಲಿ, ಮೊದಲು ಬಿತ್ತಿದ ಬೆಳೆಯ ಸುಮಾರು 20-30 ಪ್ರತಿಶತವು ಈಗಾಗಲೇ ಒಣಗಿ ಹೋಗಿದೆ ಮತ್ತು ಸುಮಾರು 20% ಪ್ರದೇಶದಲ್ಲಿ ಮತ್ತೆ ಹತ್ತಿಯನ್ನು ಬಿತ್ತಲಾಗಿದೆ. ಗೊತ್ತುಪಡಿಸಿದ ನೀರಾವರಿ ಭೂಮಿಗಳಲ್ಲಿ ನೀರು ಹಾಯಿಸಲು ರೈತರು ಕಾಯುತ್ತಿದ್ದು, ಆದಾಗ್ಯೂ ನೀರಾವರಿಗಾಗಿ ಕಾಲುವೆ ನೀರನ್ನು ಬಿಡುಗಡೆ ಮಾಡುವ ಸಾಧ್ಯತೆ ಕಡಿಮೆ ಎಂದು ತೋರುತ್ತಿದೆ. ವರದಿ ಮಾಡುವ ಸಮಯದಲ್ಲಿ ಆರಂಭಿಕ ಬಿತ್ತಿದ ಬೆಳೆಗಳು 25-30 ದಿನಗಳದ್ದಾಗಿದ್ದು, ಕೆಲವು ನೀರಾವರಿ ಪ್ರದೇಶಗಳಲ್ಲಿ ಮತ್ತು ಮಳೆಯಾಶ್ರಿತ ಪ್ರದೇಶಗಳಲ್ಲಿ ಬಿತ್ತನೆ ಕಾರ್ಯವನ್ನು ಕೈಗೆತ್ತಿಕೊಳ್ಳಲಾಗಿದೆ. ಇದಲ್ಲದೇ, ಉಳಿದ ರೈತರು ಈ ವಾರದಲ್ಲಿ ಭೂಮಿ ಸಿದ್ಧತೆಗಳನ್ನು ಕೈಗೊಳ್ಳಲು ಸೂಚಿಸಲಾಗಿದೆ. ಬಿತ್ತನೆ ಕೈಗೊಂಡ ರೈತರಿಗೆ, ಪ್ರತಿ ಲೀಟರ್ ನೀರಿಗೆ 3.5 ಮಿಲಿ ಪೆಂಡಿಮೆಥಾಲಿನ್ ಅನ್ನು ಸಿಂಪಡಿಸಲು ಸೂಚಿಸಲಾಗಿದೆ.

ಚಾಮರಾಜನಗರದಲ್ಲಿ ಬೆಳೆಯು, ಮೊಗ್ಗು (ಸ್ಕ್ವೇರ್) ರಚನೆಯಿಂದ ಹೂಬಿಡುವ ಹಂತದಲ್ಲಿದ್ದು (51 ರಿಂದ 66 ದಿನಗಳ ಅವಧಿ), ಯೂರಿಯಾ ಗೊಬ್ಬರವನ್ನು ಮೇಲುಗೊಬ್ಬರವಾಗಿ ನೀಡುವಿಕೆ, ಕಳೆ ತೆಗೆಯುವುದು, ಅಂತರ ಬೇಸಾಯ ಮತ್ತು ಮಣ್ಣು ಏರಿಸುವ ಕಾರ್ಯಗಳು ನಡೆಯುತ್ತಿವೆ. ಎಲೆ ಜಿಗಿ ಹುಳುಗಳು ಮತ್ತು ಹೇನುಗಳ ಬಾಧೆ ಕಂಡುಬಂದಿದೆ.

**ಸಲಹೆ:**

ಧಾರವಾಡ ಜಿಲ್ಲೆಯಲ್ಲಿ, ಮೂತಿ ಹುಳುವಿನ ನಿಯಂತ್ರಣಕ್ಕಾಗಿ ಪ್ರತಿ 20 ಸಾಲು ಹತ್ತಿಯ ನಂತರ ಬೆಂಡೆ ಬೆಳೆಯನ್ನು ಬೆಳೆಯಲು ರೈತರಿಗೆ ಸಲಹೆ ನೀಡಲಾಗಿದೆ.

ರಾಯಚೂರಿನಲ್ಲಿ, ರೈತರು ಕಳೆ ನಿರ್ವಹಣೆ ಮತ್ತು ಅಂತರ-ಕೃಷಿ ಕಾರ್ಯಾಚರಣೆಗಳನ್ನು ಆದ್ಯತೆಯ ಮೇಲೆ ಕೈಗೊಳ್ಳಲು ಸೂಚಿಸಲಾಗಿದೆ. ಬೆಳೆಯ 25-30 ದಿನಗಳ ಅವಧಿಯಲ್ಲಿ, ಪ್ರತಿ ಲೀಟರ್ ನೀರಿಗೆ 1.5 ಮಿಲಿ ಪೈರಿಥಿಯೋಬ್ಯಾಕ್ ಸೋಡಿಯಂ ಕಳೆನಾಶಕವನ್ನು ಸಿಂಪಡಿಸಬೇಕು. ಮೊದಲು ಬಿತ್ತನೆ ಮಾಡಿದ ಬೆಳೆಗೆ ಯೂರಿಯಾ ಮತ್ತು ಮ್ಯೂರೇಟ್ ಆಫ್ ಪೊಟಾಷ್ ಗಳ ಮೊದಲ ಮೇಲುಗೊಬ್ಬರವನ್ನು ನೀಡಬೇಕು. ರಸ ಹೀರುವ ಕೀಟಗಳ ಬಾಧೆಯು ಆರ್ಥಿಕ ಗರಿಷ್ಠ ಮಟ್ಟಕ್ಕಿಂತ ಮೇಲಿದ್ದಲ್ಲಿ ಶಿಫಾರಸು ಮಾಡಲಾದ ಫ್ಲೋನಿಕಾಮಿಡ್ 50% WG (4 ಗ್ರಾಂ / 10 ಲೀಟರ್ ನೀರು) ಪ್ರಮಾಣವನ್ನು ಸಿಂಪಡಿಸಲು ಸೂಚಿಸಲಾಗಿದೆ.

ಚಾಮರಾಜನಗರ ಜಿಲ್ಲೆಯ ರೈತರಿಗೆ, ರಸ ಹೀರುವ ಕೀಟಗಳ ನಿಯಂತ್ರಣಕ್ಕಾಗಿ ಪ್ರತಿ ಎಕರೆಗೆ 8-12 ಹಳದಿ ಅಂಟು ಬಲೆಗಳನ್ನು ನೆಡಲು, ಮತ್ತು ಇಮಿಡಾಕ್ಲೋಪ್ರಿಡ್ 17.8 SL @ ಪ್ರತಿ ಲೀಟರ್ ನೀರಿಗೆ 0.3 ಮಿ.ಲೀ. ನಂತೆ ಬೆರೆಸಿ ಸಿಂಪಡಿಸಲು ಸಲಹೆ ನೀಡಲಾಗಿದೆ.

*ಭಾ. ಕೃ. ಅ. ಪ. – ಕೇಂದ್ರೀಯ ಹತ್ತಿ ಸಂಶೋಧನಾ ಸಂಸ್ಥೆ, ನಾಗಪುರ*
*ಕನ್ನಡ ಅನುವಾದ*
*ಡಾ. ನೀಲಕಂಠ ಸ. ಹಿರೇಮನಿ*